ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಪರಿಷತ್

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 25/6/2020

# ಮಾಸಾಂತ್ಯಕ್ಕೆ ಪರಿಷತ್ ನಾಮ ನಿರ್ದೇಶನ ಶಿಫಾರಸು ಸಾಧ್ಯತೆ?

ಉವಾ 25/6/20

■ ನಾಮ ನಿರ್ದೇಶನ ಸದಸ್ಯರ ಆಯ್ಕೆಯ ಜವಾಬ್ದಾರಿ ಮುಖ್ಯಮಂತ್ರಿಗೆ

ಬೆಂಗಳೂರು: ಜೂನ್ 23 ರಂದು ಖಾಲಿಯಾಗಿರುವ ವಿಧಾನ ಪರಿಷತ್ತಿನ ಐದು ನಾಮನಿರ್ದೇಶನ ಸದಸ್ಯರ ಸ್ಥಾನಗಳಿಗೆ ಜೂನ್ ಮಾಸಾಂತ್ಯಕ್ಕೆ ರಾಜ್ಯಪಾಲರಿಗೆ ಸರ್ಕಾರ ಹೆಸರು ಶಿಫಾರಸು ಮಾಡುವ ಸಾಧ್ಯತೆ ಇದೆ.

ನಾಮ ನಿರ್ದೇಶನ ಸದಸ್ಯರ ಆಯ್ಕೆಯ ಜವಾಬ್ದಾರಿಯನ್ನು ಸಚಿವ ಸಂಪುಟದಲ್ಲಿ ಮುಖ್ಯಮಂತ್ರಿಗಳಿಗೆ ನೀಡಲಾಗಿದೆ. ಆದರೆ, ಪಕ್ಷದ ವೇದಿಕೆಯಲ್ಲಿ ಯಾರನ್ನು ನಾಮ ನಿರ್ದೇಶನ ಮಾಡಬೇಕು ಎನ್ನುವ ಕುರಿತು ಅಧಿಕೃತ ಚರ್ಚೆಯಾಗಿಲ್ಲ.

ಆದರೆ, ಆರ್‌ಎಸ್‌ಎಸ್ ಮೂಲದವರಿಗೆ ಆದ್ಯತೆ ನೀಡುವ ಸಾಧ್ಯತೆ ಇದೆ ಎನ್ನಲಾಗುತ್ತಿದ್ದು ಸಾಹಿತ್ಯ ವಲಯದಲ್ಲಿ ಹಿರಿಯ ಸಾಹಿತಿ ಎಸ್.ಎಲ್.ಭೈರಪ್ಪ ಹೆಸರು ಕೇಳಿ ಬರುತ್ತಿದ್ದು, ಅವರನ್ನು ವಿಧಾನ ಪರಿಷತ್ ಆಯ್ಕೆ ಮಾಡಬೇಕಾ ಅಥವಾ ರಾಜ್ಯಸಭೆಗೆ ನಾಮ ನಿರ್ದೇಶನ ಮಾಡಬೇಕಾ ಎನ್ನುವ ಬಗ್ಗೆ ಪಕ್ಷದಲ್ಲಿ ಗೊಂದಲ ಇದೆ ಎಂದು ತಿಳಿದು ಬಂದಿದೆ.

ಅಲ್ಲದೆ ಪಕ್ಷದ ಮೂಲಗಳ ಪ್ರಕಾರ ಸಂಘ ಪರಿವಾರದೊಂದಿಗೆ ಉತ್ತಮ ಸಂಬಂಧ ಹೊಂದಿರುವ ಬೆಂಗಳೂರಿನ ಕಾಲೇಜೊಂದರ ವಿಜ್ಞಾನ ಪ್ರಾಧ್ಯಾಪಕರು, ಕರಾವಳಿ ಭಾಗದವರು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಮಾಜ ಸೇವೆಯಲ್ಲಿ ತೊಡಗಿರುವ ವ್ಯಕ್ತಿಯೊಬ್ಬರನ್ನು ಪರಿಗಣಿಸುವ ಬಗ್ಗೆ ಚಿಂತನೆ ನಡೆದಿದೆ ಎಂದು ತಿಳಿದು ಬಂದಿದೆ.

ಇನ್ನೊಂದೆಡೆ ಮಾಜಿ ಸಚಿವ ಎಚ್. ವಿಶ್ವನಾಥ್ ಅವರನ್ನು ಸಾಹಿತ್ಯ ವಲಯದಿಂದ ಆಯ್ಕೆ ಮಾಡಬೇಕೆಂದು ವಲಸಿಗರು ಮುಖ್ಯಮಂತ್ರಿ ಮೇಲೆ ಒತ್ತಡ ಹೇರುತ್ತಿದ್ದಾರೆ ಎಂದು ತಿಳಿದು ಬಂದಿದ್ದು, ಅವರ ಆಯ್ಕೆಗೆ ಕಾನೂನು ತೊಡಕಾಗುವ ಸಾಧ್ಯತೆ ಇದೆ ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ ಎನ್ನಲಾಗಿದ್ದು ಹೀಗಾಗಿ ಈ ಬಗ್ಗೆ ಮುಖ್ಯಮಂತ್ರಿ ಯಡಿಯೂರಪ್ಪ ಇನ್ನೂ ಗೊಂದಲದಲ್ಲಿದ್ದಾರೆ ಎನ್ನಲಾಗುತ್ತಿದೆ.

ಮೈತ್ರಿ ಸರ್ಕಾರ ಪತನಗೊಳಿಸಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರಲು ಕಾರಣವಾಗಿರುವ ಮಾಜಿ ಸಚಿವ ಸಿ.ಪಿ.ಯೋಗೇಶ್ವರ್ ಅವರನ್ನು ಪರಿಗಣಿಸಲು ಮುಖ್ಯಮಂತ್ರಿ ಯಡಿಯೂರಪ್ಪ ಒಲವು ತೋರಿದ್ದಾರೆ ಎನ್ನಲಾಗುತ್ತಿದೆ. ಆದರೆ, ಪಕ್ಷದ ವಲಯದಲ್ಲಿ ಮಾಳವಿಕಾ ಅವಿನಾಶ್ ಹಾಗೂ ಜಗ್ಗೇಶ್ ಹೆಸರುಗಳೂ ಚರ್ಚೆಯಾಗುತ್ತಿವೆ ಎಂದು ತಿಳಿದು ಬಂದಿದೆ.